**Signature and Name of Invigilator**

1. (Signature) ____________________

   (Name) ____________________

2. (Signature) ____________________

   (Name) ____________________

**Roll No.** | | | | | | | | |

(In figures as per admission card)

**Roll No.** ____________________

(In words)

**Test Booklet No.**

**J – 2108**

**PAPER – III**

**Time : 2½ hours]**

# KANNADA

**[Maximum Marks : 200**

Number of Pages in this Booklet : **32**

Number of Questions in this Booklet : **26**

## Instructions for the Candidates

1. Write your roll number in the space provided on the top of this page.
2. Answers to short answer/essay type questions are to be given in the space provided below each question or after the questions in the Test Booklet itself.

   **No Additional Sheets are to be used.**
3. At the commencement of examination, the question booklet will be given to you. In the first 5 minutes, you are requested to open the booklet and compulsorily examine it as below :
   (i) To have access to the Test Booklet, tear off the paper seal on the edge of this cover page. Do not accept a booklet without sticker-seal and do not accept an open booklet.
   (ii) **Tally the number of pages and number of questions in the booklet with the information printed on the cover page. Faulty booklets due to pages/questions missing or duplicate or not in serial order or any other discrepancy should be got replaced immediately by a correct booklet from the invigilator within the period of 5 minutes. Afterwards, neither the question booklet will be replaced nor any extra time will be given.**
4. Read instructions given inside carefully.
5. One page is attached for Rough Work at the end of the booklet before the Evaluation Sheet.
6. If you write your name or put any mark on any part of the Answer Sheet, except for the space allotted for the relevant entries, which may disclose your identity, you will render yourself liable to disqualification.
7. You have to return the Test booklet to the invigilators at the end of the examination compulsorily and must not carry it with you outside the Examination Hall.
8. **Use only Blue/Black Ball point pen.**
9. **Use of any calculator or log table etc. is prohibited.**
10. **There is NO negative marking.**

## परीक्षार्थियों के लिए निर्देश

1. पहले पृष्ठ के ऊपर नियत स्थान पर अपना रोल नम्बर लिखिए।
2. लघु प्रश्न तथा निबंध प्रकार के प्रश्नों के उत्तर, प्रत्येक प्रश्न के नीचे या प्रश्नों के बाद में दिये हुये रिक्त स्थान पर ही लिखिये।

   **इसके लिए कोई अतिरिक्त कागज का उपयोग नहीं करना है।**
3. परीक्षा प्रारम्भ होने पर, प्रश्न-पुस्तिका आपको दे दी जायेगी। पहले पाँच मिनट आपको प्रश्न-पुस्तिका खोलने तथा उसकी निम्नलिखित जाँच के लिए दिये जायेंगे जिसकी जाँच आपको अवश्य करनी है :
   (i) प्रश्न-पुस्तिका खोलने के लिए उसके कवर पेज पर लगी सील को फाड़ लें। खुली हुई या बिना स्टीकर-सील की पुस्तिका स्वीकार न करें।
   (ii) **कवर पृष्ठ पर छपे निर्देशानुसार प्रश्न-पुस्तिका के पृष्ठ तथा प्रश्नों की संख्या को अच्छी तरह चैक कर लें कि ये पूरे हैं। दोषपूर्ण पुस्तिका जिनमें पृष्ठ / प्रश्न कम हों या दुबारा आ गये हों या सीरियल में न हों अर्थात किसी भी प्रकार की त्रुटिपूर्ण पुस्तिका स्वीकार न करें तथा उसी समय उसे लौटाकर उसके स्थान पर दूसरी सही प्रश्न-पुस्तिका ले ले। इसके लिए आपको पाँच मिनट दिये जायेंगे। उसके बाद न तो आपकी प्रश्न-पुस्तिका वापस ली जायेगी और न ही आपको अतिरिक्त समय दिया जायेगा।**
4. अन्दर दिये गये निर्देशों को ध्यानपूर्वक पढ़ें।
5. उत्तर-पुस्तिका के अन्त में कच्चा काम (Rough Work) करने के लिए मूल्यांकन शीट से पहले एक पृष्ठ दिया हुआ है।
6. यदि आप उत्तर-पुस्तिका पर अपना नाम या ऐसा कोई भी निशान जिससे आपकी पहचान हो सके, किसी भी भाग पर दर्शाते या अंकित करते हैं तो परीक्षा के लिये अयोग्य घोषित कर दिये जायेंगे।
7. आपको परीक्षा समाप्त होने पर उत्तर-पुस्तिका निरीक्षक महोदय को लौटाना आवश्यक है और इसे परीक्षा समाप्ति के बाद अपने साथ परीक्षा भवन से बाहर न लेकर जायें।
8. **केवल नीले / काले बाल प्वाईंट पैन का ही इस्तेमाल करें।**
9. **किसी भी प्रकार का संगणक ( कैलकुलेटर ) या लाग टेबल आदि का प्रयोग वर्जित है।**
10. **गलत उत्तर के लिए अंक नहीं काटे जायेंगे।**

# KANNADA

# ಕನ್ನಡ

## PAPER – III

## ಪತ್ರಿಕೆ – III

**NOTE :** **This paper is of two hundred (200) marks containing four (4) sections. Candidates are required to attempt the questions contained in these sections according to the detailed instructions given therein.**

**ಸೂಚನೆ :** ಈ ಪತ್ರಿಕೆಯು ನಾಲ್ಕು (4) ಭಾಗಗಳನ್ನೊಳಗೊಂಡಿದ್ದು ಒಟ್ಟು ಇನ್ನೂರು (200) ಅಂಕಗಳನ್ನು ಒಳಗೊಂಡಿರುತ್ತದೆ. ಅಭ್ಯರ್ಥಿಗಳು ಆಯಾ ಭಾಗಗಳಲ್ಲಿ ಪ್ರತ್ಯೇಕವಾಗಿ ಕೊಟ್ಟಿರುವ ಸೂಚನೆಗಳಗನುಸಾರವಾಗಿ ಉತ್ತರಿಸಬೇಕು.

## SECTION - I

## ಭಾಗ – I

**Note :** This section contains five (5) questions based on the following paragraph. Each question should be answered in about thirty (30) words and each carries five (5) marks.

**(5x5=25 marks)**

**ಸೂಚನೆ :** **ಈ ಕೆಳಗಿನ ಗದ್ಯಭಾಗವನ್ನು ಓದಿ ಕೊಟ್ಟಿರುವ ಪ್ರಶ್ನೆಗಳಿಗೆ ಪ್ರತಿಯೊಂದಕ್ಕೂ ಮೂವತ್ತು (30) ಪದಗಳ ಮಿತಿಯಲ್ಲಿ ಎಲ್ಲ ಪ್ರಶ್ನೆಗಳನ್ನೂ ಉತ್ತರಿಸಿರಿ. ಪ್ರತಿಯೊಂದು ಪ್ರಶ್ನೆಗೂ ಐದು (5) ಅಂಕಗಳು.**

**(5x5=25 ಅಂಕಗಳು)**

ಈ ಜಂಬೂದ್ವೀಪದ ಭರತಕ್ಷೇತ್ರದೊಳ್ ವಿದೇಹಮೆಂಬುದು ನಾಡಲ್ಲಿ ಮಿಥಿಳೆಯೆಂಬುದು ಪೊೞಲದನಾಳ್ವೊಂ ಪದ್ಮರಥನೆಂಬೊನರಸನ ಸಂತತಿಯಿಂ ಬಂದ ವಾಮರಥನೆಂಬೊನರಸನಾತನ ಮಹಾದೇವಿ ಬಂಧುಮತಿಯೆಂಬೊಳಂತವರ್ಗ್ಗಳಿಷ್ಟವಿಷಯ ಕಾಮಭೋಗಂಗಳನನುಭವಿಸುತ್ತಂ ಪಲಕಾಲಂ ಸಲೆ ಮತ್ತಾ ಪೊೞಲೊಳ್ ಯಮದಂಡನೆಂಬೊಂ ತಳಾಱಂ ಮತ್ತಲ್ಲ ಇರ್ಪೊಂ ವಿದ್ಯುಚ್ಚೋರನೆಂಬೊಂ ಕಳ್ಳನಾತಂ ಜೃಂಭಿನಿ ಸ್ತಂಭಿನಿ ಮೋಹಿನಿ ಸರ್ಷಪಿ ತಾಳೋದ್ಘಾಟಿಸಿ ವಿದ್ಯಾಮಂತ್ರಂ ಚೂರ್ಣ ಯೋಗ ಘುಟಿಕಾಂಜನಮೆಂದಿವು ಮೊದಲಾಗೊಡೆಯ ತಸ್ಕರಶಾಸ್ತ್ರಂಗಳೊಳಾದಮಾನುಂ ಕುಶಲನಂತಪ್ಪ ಕಳ್ಳಂ ಪೊೞಲ ಕಸವರಂಗಳನಿರುಳ್ ಕಳ್ದು ಪೊೞಲ್ಗೆ ನಾಡೆಯಂತರದೊಳೊಂದು ಪರ್ವತಮುಂಟಲ್ಲಿ ಪಿರಿದೊಂದು ಗುಹೆಯುಂಟದಱೊಳಗೆ ಕಳ್ದ ಕಸವರಂಗಳೆಲ್ಲಮಂ ಪೂಡ್ದಿಟ್ಟು ಗುಹೆಯ ಬಾಗಿಲಂ ಪಿರಿದೊಂದು ಸಿಲೆಯಂ ತಂದಿಟ್ಟು ಮುಚ್ಚಿ ಬಂದು ಪಗಲೆಲ್ಲಂ ಪಾೞ್ದೇಗುಲದೊಳಂಜನಮನೆಚ್ಚಿ ತಾಂ ತೊನ್ನನಾಗಿ ಮುರುಂಟಿದ ಕೈಯುಂ ಕಾಲುಂ ಬೆರಸು ಮೂಗೊಳಗರ್ದು ರಸಿಗೆ ಸುರಿಯೆ ನೊಱವುಗಳ್ ಮುಸುಱಿಕೊಂಡು ತಿನೆ ಪೇಸಿದನಾಗಿ ಲೋಗರ ಮನೆಗಳೊಳ್ ಭೈಕ್ಷಮಂ ಬೇಡಿ ಮನೆಮನೆಯಂ ತೊೞಲ್ದು ತನ್ನ ತೊನ್ನುಗೊಂಡಿರ್ಪುದನಱಿಪುತ್ತುಮಿಂತು ಪಗಲೆಲ್ಲಮಿರ್ದಿರುಳಪ್ಪಾಗಳ್ ದಿವ್ಯಮಪ್ಪ ತನ್ನ ಸ್ವಾಭಾವಿಕಮಪ್ಪ ಮುನ್ನಿನ ರೂಪಂ ಕೈಕೊಂಡು ಪುಟ್ಟಗೆಯನುಟ್ಟು ಮೆಯ್ಯಂ ಪೂಸಿ ಪೂವಂ ಮುಡಿದು ಕರ್ಪೂರ ಸಮ್ಮಿಶ್ರಿತಮಪ್ಪ ತಂಬುಲಂದಿನುತ್ತುಂ ಸೂಳೆಗೇರಿಗಳಂ ತೊೞಲ್ದು ತನ್ನಂ ಮೆಚ್ಚಿಯುತ್ತಂ ಮನಕ್ಕೆವಂದಗ್ಗಳದೊಳ್ಪೆಂಡಿರೊಳೊತ್ತೆಯನಿಟ್ಟು ಭೋಗೋಪಭೋಗಂಗಳ್ಗೆ ಕಸವರಮಂ ಕೊಟ್ಟನುಭವಿಸುತ್ತಮಾರುಮಱಿಯದಂತಿರ್ದು ಬಚ್ಚರ ದೂಸಿಗರ ನಿಯೋಗಿಗಳ ಅಗ್ಗಯಿಲೆಯರಪ್ಪ ಸೂಳೆಯರ ಸಾಮಂತರ ಕಸವರಂಗಳೆಲ್ಲಮಂ ಕಳ್ದು ಮತ್ತೊಂದು ದಿವಸಂ ಪದ್ಮರಥಂಗೊಸೆದಚ್ಯುತೇಂದ್ರನಟ್ಟಿದ ದಿವ್ಯಮಪ್ಪ ಸರ್ವರುಜಾಪಹಾರಮೆಂಬ ಹಾರಂ ಸಂತತಿಯಿಂ ವಾಮರಥಂಗೆ ಬಂದುದಂ ವಾಮರಥಂ ಕರುಮಾಡದೇೞನೆಯ ನೆಲೆಯೊಳ್ ತನ್ನ ಉಂದು ವೋವರಿಗೆಯ ಪುಡಿಕೆಯೊಳಟ್ಟೆಲ್ಲಾಕಾಲಮುಂ ಗಂಧ ಪುಷ್ಪ ದೀಪ ಧೂಪಾಕ್ಷತಂಗಳಂದರ್ಚಿಸುತ್ತುಂ ಪೊಡೆಮಡುತ್ತಮಿರ್ಕ್ಕುಮಿಂತಪ್ಪ ಹಾರಮಂ ವಿದ್ಯುಚ್ಚೋರನಂಜನಮಂ ಕಣ್ಣೊಳೆಚ್ಚಿ ಯಾರುಂ ತನ್ನಂ ಕಾಣದಂತಾಗಿರೆ ಅರಮನೆಯಂ ಪೊಕ್ಕರಸನ ಮಱಲುಂದುವೋವರಿಯಂ ಪೊಕ್ಕು ತಲೆ ದೆಸೆಯೊಳರ್ಚಿಸಿರ್ದ ಪುಡಿಕೆಯಂ ತೆಱೆದು ಹಾರಮಂ ಕೊಂಡರಮನೆಯಿಂ ಪೊಱಮಟ್ಟು ಪೋಗಿ ಪೊಱವೊೞಲ ಗುಹೆಯೊಳ್ ಪೊಡ್ದಿಟ್ಟು ಪೊೞಲ್ಗೆವಂದು ಮುನ್ನಿನಂತೆ ತೊನ್ನರೂಪಂ ಕೈಕೊಂಡಿರ್ದಂ ಮತ್ತಿತ್ತರಸಂ ನೇಸರ್ಮೂಡೆ

ಹಾರಮಂ ಕಾಣದೆ ಆಸ್ಥಾನ ಮಂಟಪದೊಳ್ ಸಿಂಹಾಸನ ಮಸ್ತಕಸ್ಥಿತನಾಗಿರ್ದು ತಳಾಱನಪ್ಪ ಯಮದಂಡಂಗೆ ಬೞಿಯಟ್ಟಿವರಿಸಿ ಇಂತೆಂದನೆಲವೋ ಯಮದಂಡಾ ಪೊೞಲ ಪಾರ್ವರ ಪರದರ ಸೂಳೆಯರ ಒಕ್ಕಲ ಮಕ್ಕಳ ಕಸವರಮೆಲ್ಲಮಂ ಕಳ್ದೊಡಮಾರಯ್ಯದೆ ಕೆಮ್ಮಗಿರ್ಪೆಯಲ್ಲದೆಯುಮೆಮ್ಮ ಸೆಜ್ಜೆಯೋವರಿಯಂ ಕಳ್ಳಂ ಪೊಕ್ಕು ಪುಡಿಕೆಯಂ ತೆಱ್ದಚ್ಯುತೇಂದ್ರನಿತ್ತ ಕುಲಧನಮಪ್ಪ ಹಾರಮಂ ಕೊಂಡು ಪೋದಂ ಕಳ್ಳನನಾರಯ್ದು ಹಾರಮಂ ಕೊಂಡು ಬಾ ಅಲ್ಲದಾಗಳ್ ಕಳ್ಳಂಗೆ ತಕ್ಕ ನಿಗ್ರಹಮಂ ನಿನಗೆ ಮಾಡಿದಪ್ಪೆನೆಂದೊಡೆ ತಳಾಱನೆಂದಂ ದೇವಾ ಏೞುದಿವಸಮೆನಗೆಡೆಯನೀವುದೇೞುದಿವಸದಿಂದೊಳಗೆ ಕಳ್ಳನನಾರಯ್ಯಲಾಱದಾಗಳ್ ದೇವರೆನ್ನಂ ಮೆಚ್ಚುಕೆಯ್ವುದೆಂದೊಡರಸನೆಂತೆಗೆಯ್ಯೆಂದೊಡರಮನೆಯಿಂದಂ ಪೊಱಮಟ್ಟು ಪೊೞಲೊಳಗೆ ಸೂಳೆಗೇರಿಗಳೊಳಮಂಗಡಿಗಳೊಳಂ ಬಸದಿಗಳೊಳಂ ವಿಹಾರಂಗಳೊಳಂ ಕೇರಿಗಳೊಳಮಾರಮೆಗಳೊಳಂ ದೇವಾಲಯಂಗಳೊಳಂ ಪೊಱವೊೞಲೊಳಂ ಕೆಲದ ಪೊೞಲ್ಗಳೊಳಮಾಱುಂ ದಿವಸಂ ನಿರಂತರಮಾರಯ್ದೆಲ್ಲಿಯುಂ ಕಾಣದೇೞನೆಯ ದಿವಸದಂದು ಪಾೞ್ದೇಗುಲದೊಳಿರ್ದು ತೊನ್ನಂ ಪೋಪಾಗಳಳಱುವಳ್ಳಮಂ ಕಂಡದಂ ವಿದ್ಯಾಧರಕರಣದಿಂ ಲಂಘಿಸಿ ಪೋಪುದಂ ಯಮದಂಡಂ ಗೆಂಟಱೊಳಿರ್ದು ಕಂಡಿವನೆ ಕಳ್ಳನೆಂದು ನಿಶ್ಚಯಿಸಿ ಪಿಡಿದರಮನೆಗೆ ಪುಯ್ಯಲಿಡೆಯಿಡೆ ಕೊಂಡುಪೋಗಿಯರಸಂಗೆ ಕಳ್ಳನಂ ತಂದೆನೆಂದು ತೋಱೆ ಈತಂ ಕಳ್ಳನೆಂದರಸಂಗೆ ವೇೞ್ದೊಡೆ ತೊನ್ನನಿಂತೆಂದಂ ದೇವಾ ನಾಂ ಕಳ್ಳನಲ್ಲದುದರ್ಕ್ಕೆ ಪೊೞಲೆಲ್ಲಮಱಿಗುಂ ಕಳ್ಳನನಾರಯ್ಯಲಾಱದೆನ್ನಂ ತನ್ನ ಸಾವಿಂಗಂಜಿ ಬಡವನಂ ದೇಸಿಗನಂ ಪೊೞಲೊಳ್ ಬೈಕಂದಿರಿದುಂಡು ಬಾೞ್ವಿನಂ ಪಿಡಿದುಕೊಂಡು ಬಂದು ಕೊಲಿಸಿದಪ್ಪನೆಂದೊಡೆ ತಳಾಱಂ ಕಳ್ಳರನಾರಯ್ವ ಶಾಸ್ತ್ರಂಗಳೊಳಾದಮಾನುಂ ಕುಶಲನಪ್ಪುದಱಿಂದರಸಂಗಿಂತೆಂದನೀತಂ ತನ್ನ ರೂಪುಗರೆದಿರುಳ್ ಪೊೞಲೆಲ್ಲಮಂ ಕಳ್ದು ದಿವಸಕ್ಕೀ ಪಾಂಗಿನೊಳ್ ತೊನ್ನನಾಗಿರ್ಪೊಂ ನೀಮುಂ ನಂಬದಾಗಳ್ ಪ್ರತ್ಯಯಮಂ ಮಾಡಿ ತೋರ್ಪೆನೆಂದಾಗಳ್ ಪ್ರತಿಘುಟಿಕಾಂಜನಂಗಳಂ ತೊನ್ನನ ಕಣ್ಣಿನೊಳೆಚ್ಚಿದೊಡೆ ದಿವ್ಯಮಪ್ಪ ತನ್ನ ಮುನ್ನಿನ ರೂಪಾಗಿರ್ದಿಂತೆಂದನೀತಂ ಘುಟಿಕಾಂಜನ ಕುಹಕಂ ಇಂದ್ರಜಾಲಂಗಳಂ ಬಲ್ಲೊನಪ್ಪುದಱಿಂದೆಲ್ಲಾ ರೂಪುಗಳಂ ಮಾಡಲ್ ಬಲ್ಲೊನೆಂದೊಡೆ ತಳಾಱನೆಂದಂ ಪೆಱರ್ಗೆ ಮಾಡೀ ಪ್ರತ್ಯಯುಮಂ ತೋರ್ಪೆನೆಂದರಸನನುಮತದಿಂದರಸಿಯರ ಸೂಳೆಯರ ಕಣ್ಗಳೊಳ್ ಘುಟಿಕಾಂಜನಂಗಳನೆಚ್ಚಿದೊಡ ನಿಬರುಂ ತೊನ್ನೆಯರಾಗಿರ್ಪನ್ನೆಗಂ ಮತ್ತಂ ಬೞಿಕ್ಕೆ ಪ್ರತಿಘುಟಿಕಾಂಜನಂಗಳನೆಚ್ಚಿದೊಡೆ ಸ್ವಾಭಾವಿಕಮಪ್ಪ ತಮ್ಮ ಮುನ್ನಿನ ರೂಪುಗಳಂ ಕೈಕೊಂಡಿರ್ದೋರಾಗಳರಸಂಗೆ ನಂಬುಗೆಯಾಗಿ ನೆಟ್ಟನಿವಂ ಕಳ್ಳನಪ್ಪೊನೀತನಂ ದಂಡಿಸೆಂದು ಯಮದಂಡಂಗೆ ಬೆಸವೇೞ್ದೊಡಾತನಂತೆ ಗೆಯ್ವೆನೆಂದಾತನಂ ತನ್ನ ಮನೆಗೊಡಗೊಂಡು ಪೋಗಿ ಮಾಘಮಾಸದಿರುಳ್ ಕಡುಸೀತದೊಳ್ ಘೋರಮಪ್ಪ ಮೂವತ್ತೆರಡು ದಂಡಣೆಗಳಂ ನೀಡುಂ ದಂಡಿಸೆಯನಿತುಮಂ ಬಾೞ್ವಾೞ್ ಅವಯವದೆ ಸೈರಿಸಿಯುಂ ಕಳ್ಳನಲ್ಲೆನಯ್ಯೋ ಬಲ್ಲಾಳ್ತನದಿಂದೆನ್ನಂ ತಳಾಱಂ ಕೊಂದಪ್ಪನೆಂದೊಳಱೆ ಪುಯ್ಯಲಿಡೆ ತಳಾಱಂಗೆ ಕಳ್ಳನೀತನಲ್ಲೆಂಬುದೊಂದು ನಂಬುಗೆಯಾಗಿ ನೇಸಱ್ ಮೂಡೆಯರಮನೆಗೆ ಪೋಗಿ ಅರಸಂಗಿಂತೆಂದು ಬಿನ್ನಪಂಗೆಯ್ದಂ ದೇವಾ ಮೂವತ್ತೆರಡು ಘೋರಮಪ್ಪ ದಂಡಣೆಗಳಿಂದಂ ಕಳ್ಳನಂ ದಂಡಿಸಿ ನೋಡಿದೆನಾತನಮೋಘಂ ಕಳ್ಳನಲ್ಲೆನ್ನಂ ದೇವರ್ಮೆಚ್ಚುಕೆಯ್ವುದೆಂದೊಡರಸಂ ಶ್ಮಶಾನದ ಸೂಲದೊಳ್ ಯಮದಂಡನ ನಿಕ್ಕಿಮೆಂದಾಳ್ಗಳ್ಗೆ ಬೆಸವೇೞ್ದೊಡವರುಮಾತನಂ ಶ್ಮಶಾನಕ್ಕೆೞ್ದುಕೊಂಡು ಪೋಗಿ ದರ್ಕ್ಕಂ ಬಸಿದು

1. ವಿದ್ಯುಚ್ಚೋರನ ದಿವಾರಾತ್ರಿಯ ಬದುಕಿನ ಕ್ರಮವನ್ನು ತಿಳಿಸಿ.

2. ವಿದ್ಯುಚ್ಚೋರನ ಚೋರ ಚಾತುರ್ಯವನ್ನು ನಿರೂಪಿಸಿ.

**3.** ರಾಜ ಮತ್ತು ತಳಾರರ ನಡುವೆ ನಡೆದ ಮಾತುಕಥೆಯ ಸಾರವೇನು ?

**4.** ಸರ್ವರುಜಾಪಹಾರವನ್ನು ಅಪಹರಿಸಿದವನನ್ನು ಪತ್ತೆ ಮಾಡಿದ ಬಗೆ ಹೇಗೆ ?

5. ಕಳ್ಳನ ಕಪಟತನವನ್ನು ಯಮದಂಡನು ಬೆಳಕಿಗೆ ತಂದ ಬಗೆ ಹೇಗೆ ?

## SECTION - II

## ಭಾಗ – II

**Note :** This section contains fifteen (15) questions each to be answered in about thirty (30) words. Each question carries five (5) marks.

**(5x15=75 marks)**

ಸೂಚನೆ : ಈ ಭಾಗದಲ್ಲಿ ಹದಿನೈದು (15) ಪ್ರಶ್ನೆಗಳಿವೆ. ಪ್ರತಿಯೊಂದು ಪ್ರಶ್ನೆಗೂ ಮೂವತ್ತು (30) ಪದಗಳಿಗೆ ಮೀರದಂತೆ ಉತ್ತರಿಸಿ. ಪ್ರತಿ ಪ್ರಶ್ನೆಗೂ ಐದು (5) ಅಂಕಗಳು. ಎಲ್ಲ ಪ್ರಶ್ನೆಗಳನ್ನೂ ಉತ್ತರಿಸಿ.

**(5x15=75 ಅಂಕಗಳು)**

6. ಸಾಹಿತ್ಯ ಚರಿತ್ರೆಯ ವಿಭಾಗಕ್ರಮದ ಸಿದ್ಧಾಂತಗಳು.

7. ರನ್ನನ ಗದಾಯುದ್ಧದಲ್ಲಿ ಅಶ್ವತ್ಥಾಮ – ಲಕ್ಷ್ಮಿಯರ ಸಂಭಾಷಣೆ.

8. ಕುಮಾರವ್ಯಾಸ ಭಾರತದಲ್ಲಿ ಕೃಷ್ಣ ಸಂಧಾನ.

9. ಬಸವಣ್ಣನವರ ವಚನಗಳಲ್ಲಿ ಆತ್ಮ ವಿಮರ್ಶೆ.

**10.** ಪುರಂದರದಾಸರ ಕೀರ್ತನೆಗಳಲ್ಲಿ ದೈವ ಸಲುಗೆ.

**11.** ಕನ್ನಡ ನವೋದಯ ಸಾಹಿತ್ಯದ ಉದಯಕ್ಕೆ ಪ್ರೇರಣೆಗಳು.

12. ಕನ್ನಡ ನವ್ಯ ಕವಿತೆಯ ಕೇಂದ್ರ ಬಿಂದು.

13. ಲಂಕೇಶರ 'ಸಂಕ್ರಾಂತಿ' ನಾಟಕದ ಆಶಯ.

14. ಡಾ. ಎಲ್. ಬಸವರಾಜು ಅವರ ಸಂಶೋಧನೆ.

15. ಜಿ.ಎಸ್. ಅಮೂರರ ವಿಮರ್ಶಾ ದೃಷ್ಟಿ.

16. ‘ರೀತಿ ರಾತ್ಮಾ ಕಾವ್ಯಸ್ಯ’ – ಚರ್ಚಿಸಿ.

17. ಪಾಶ್ಚಾತ್ಯ ಕಾವ್ಯ ಮೀಮಾಂಸೆಯಲ್ಲಿ ‘ಭವ್ಯತೆ’.

18. ಕನ್ನಡದಲ್ಲಿ ವರ್ಣಪಲ್ಲಟ.

19. ಕನ್ನಡದಲ್ಲಿ ನಿಷೇಧ ಪ್ರತ್ಯಯಗಳು.

20. 'ಲಘು, ಗುರು' ಗಳ ಸ್ವರೂಪ.

## SECTION - III

## ಭಾಗ – III

**Note :** This section contains five (5) questions from each of the electives / specialisations. The candidate has to choose only one elective / specialisation and answer all the five questions from it. Each question carries twelve (12) marks and is to be answered in about two hundred (200) words.

**(12x5=60 marks)**

ಸೂಚನೆ : ನೀವು ಆಯ್ಕೆ ಮಾಡಿಕೊಂಡಿರುವ ಒಂದು ಐಚ್ಛಿಕ ವಿಷಯದ ಬಗ್ಗೆ ಕೊಟ್ಟಿರುವ ಎಲ್ಲ ಪ್ರಶ್ನೆಗಳಿಗೂ ಉತ್ತರಿಸಿ. ಪ್ರತಿ ಪ್ರಶ್ನೆಗೂ ಇನ್ನೂರು (200) ಪದಗಳಿಗೆ ಮೀರದಂತೆ ಉತ್ತರಿಸಿ. ಪ್ರತಿ ಪ್ರಶ್ನೆಗೂ ಹನ್ನೆರಡು (12) ಅಂಕಗಳು.

**(12x5=60 ಅಂಕಗಳು)**

## Elective - I

## ಜಾನಪದ ಅಧ್ಯಯನ

21. ಜಾನಪದ ಸ್ವರೂಪವನ್ನು ಕುರಿತಂತೆ ವಿವಿಧ ವಿದ್ವಾಂಸರ ಅಭಿಪ್ರಾಯಗಳ ಹಿನ್ನೆಲೆಯಲ್ಲಿ ನಿಮ್ಮ ನಿಲುವನ್ನು ಸ್ಪಷ್ಟಪಡಿಸಿ.

22. ಜಾನಪದವನ್ನು ಕುರಿತ ವಿವಿಧ ಸಿದ್ಧಾಂತಗಳನ್ನು ಪರಿಚಯಿಸಿ.

23. ಸಣ್ಣಾಟದ ಸ್ವರೂಪ ಮತ್ತು ಮಹತ್ವವನ್ನು ತಿಳಿಸಿರಿ.

24. ಕರ್ನಾಟಕ ವೃತ್ತಿಗಾಯಕ ಪರಂಪರೆಗೆ ಕಂಸಾಳೆಯವರ ಕೊಡುಗೆಯನ್ನು ವಿವರಿಸಿ.

25. ಕ್ಷೇತ್ರ ಕಾರ್ಯಕರ್ತನ ಅರ್ಹತೆಗಳು ಯಾವುವು ?

**ಅಥವಾ/OR**

**Elective - II**

## ತೌಲನಿಕ ಸಾಹಿತ್ಯ ಅಧ್ಯಯನ

21. ತೌಲನಿಕ ಸಾಹಿತ್ಯ ಅಧ್ಯಯನದ ಪ್ರಮುಖ ಲಕ್ಷಣಗಳು ಹಾಗೂ ಸಮಸ್ಯೆಗಳನ್ನು ತಿಳಿಸಿರಿ.

22. ಪ್ರಾದೇಶಿಕ ಸಾಹಿತ್ಯದ ಪರಿಕಲ್ಪನೆಯನ್ನು ತೌಲನಿಕ ಅಧ್ಯಯನದ ಹಿನ್ನೆಲೆಯಲ್ಲಿ ವಿವೇಚಿಸಿ.

23. ಹೊಸಗನ್ನಡ ಕವಿತೆಗಳ ಮೇಲೆ ಇಂಗ್ಲಿಷ್ ಕವಿತೆಗಳ ಪ್ರಭಾವವನ್ನು ಗುರುತಿಸಿ.

24. 'ಬಿರುಗಾಳಿ' ನಾಟಕದ ಪ್ರೇರಣೆ ಮತ್ತು ಪ್ರಭಾವವನ್ನು ಗುರುತಿಸಿ.

25. ರಾಷ್ಟ್ರೀಯತೆಯ ಸ್ವರೂಪ ಮತ್ತು ರಾಷ್ಟ್ರೀಯ ಸಾಹಿತ್ಯ ಪರಿಕಲ್ಪನೆಯನ್ನು ವಿಶದಪಡಿಸಿ.

**ಅಥವಾ/OR**

**Elective - III**

## ಕನ್ನಡ ಛಂದಸ್ಸು

21. ಕಾವ್ಯಕ್ಕೆ ಛಂದಸ್ಸಿನ ಅಗತ್ಯವಿದೆಯೇ ? ಚರ್ಚಿಸಿ.

22. ಖ್ಯಾತ ಕರ್ಣಾಟಕಗಳು ಯಾವುವು ? ಅವುಗಳ ಸ್ವರೂಪವನ್ನು ವಿಶದಪಡಿಸಿ.

23. ರಗಳೆಯ ಮೂಲ, ಸ್ವರೂಪ ಮತ್ತು ಪ್ರಭೇದಗಳನ್ನು ಕುರಿತು ಬರೆಯಿರಿ.

24. ತ್ರಿಪದಿಯ ಸ್ವರೂಪ, ಪ್ರಭೇದ ಮತ್ತು ಇತಿಹಾಸವನ್ನು ವಿವರಿಸಿ.

25. ಸಾನೆಟ್ಟಿನ ಉಗಮ, ಸ್ವರೂಪ ಮತ್ತು ಪ್ರಭೇದಗಳನ್ನು ವಿವರಿಸಿ.

**ಅಥವಾ/OR**

**Elective - IV**

## ಶಾಸನಶಾಸ್ತ್ರ ಮತ್ತು ಕನ್ನಡ ಶಾಸನ ಸಾಹಿತ್ಯ

21. ಕನ್ನಡದ ದಾನಶಾಸನಗಳು ಹಾಗೂ ವೀರಗಲ್ಲುಗಳ ಸ್ವರೂಪವನ್ನು ವಿವರಿಸಿ.

22. ಕನ್ನಡ ಶಾಸನಗಳನ್ನು ಭಾಷಾ ಬೆಳವಣಿಗೆಯ ದೃಷ್ಟಿಯಿಂದ ವಿವೇಚಿಸಿ.

23. ಅತ್ತಿಮಬ್ಬೆಯ ಲಕ್ಕುಂಡಿ ಶಾಸನ ಮತ್ತು ನಾಗಾಯಿ ಶಾಸನಗಳ ಮಹತ್ವವೇನು ?

24. ಹಲ್ಮಿಡಿ ಶಾಸನದ ಐತಿಹಾಸಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ವಿಶದಪಡಿಸಿ.

25. "ಶಾಸನಗಳು ಇತಿಹಾಸವನ್ನು ತಿಳಿಸುವುದರೊಡನೆ ಅಂದಿನ ಸಮಾಜದ ನಂಬಿಕೆಗಳಿಗೆ ಕನ್ನಡಿಯನ್ನು ಹಿಡಿದಿವೆ"– ವಿಶದಪಡಿಸಿ.

**ಅಥವಾ/OR**

## Elective - V

## ತೌಲನಿಕ ದ್ರಾವಿಡ ಭಾಷಾ ವಿಜ್ಞಾನ

**21.** ದ್ರಾವಿಡ ಭಾಷೆಗಳ ಅಧ್ಯಯನದ ಇತಿಹಾಸವನ್ನು ವಿವರಿಸಿ.

**22.** ಭಾಷಾವಿಜ್ಞಾನದ ವೈಜ್ಞಾನಿಕ ಸ್ವರೂಪವನ್ನು ವಿಶದಪಡಿಸಿ.

**23.** ದ್ರಾವಿಡ ಭಾಷೆಗಳಲ್ಲಿ ಸ್ವರ ಪರಿವರ್ತನೆಗಳನ್ನು ವಿವರಿಸಿ.

**24.** ದ್ರಾವಿಡ ಭಾಷೆಗಳ ಸರ್ವನಾಮಗಳ ಬಗ್ಗೆ ಚರ್ಚಿಸಿ.

**25.** ದಕ್ಷಿಣ ದ್ರಾವಿಡ ಭಾಷೆಗಳನ್ನು ಪರಿಚಯಿಸಿ.

## SECTION - IV

## ಭಾಗ – IV

**Note :** This section consists of one essay type question of forty (40) marks to be answered in about one thousand (1000) words on any of the following topics. **(40x1=40 marks)**

ಸೂಚನೆ : ಈ ಕೆಳಗಿನ ಪ್ರಶ್ನೆಗೆ ಒಂದು ಸಾವಿರ (1000) ಪದಗಳಿಗೆ ಮೀರದಂತೆ ಪ್ರಬಂಧ ರೂಪದಲ್ಲಿ ಉತ್ತರಿಸಿ. ಈ ಪ್ರಶ್ನೆಗೆ ನಲವತ್ತು (40) ಅಂಕಗಳು.

**(40x1=40 ಅಂಕಗಳು)**

**26.** "ಧರ್ಮ, ನೀತಿ, ವೈಚಾರಿಕತೆಯನ್ನು ಕನ್ನಡ ಕವಿಗಳು ತಮ್ಮ ಕೃತಿಗಳಲ್ಲಿ ಸಫಲವಾಗಿ ಪ್ರತಿಬಿಂಬಿಸಿದ್ದಾರೆ"– ಚರ್ಚಿಸಿ.

**ಅಥವಾ/OR**

ಕನ್ನಡ ನವೋದಯ ಸಾಹಿತ್ಯದ ಉಗಮ ಮತ್ತು ವಿಕಾಸವನ್ನು ಪರಾಮರ್ಶಿಸಿ.

| FOR OFFICE USE ONLY | | | | | | | |
|---|---|---|---|---|---|---|---|
| **Marks Obtained** | | | | | | | |
| **Question Number** | **Marks Obtained** | **Question Number** | **Marks Obtained** | **Question Number** | **Marks Obtained** | **Question Number** | **Marks Obtained** |
| 1 | | 26 | | 51 | | 76 | |
| 2 | | 27 | | 52 | | 77 | |
| 3 | | 28 | | 53 | | 78 | |
| 4 | | 29 | | 54 | | 79 | |
| 5 | | 30 | | 55 | | 80 | |
| 6 | | 31 | | 56 | | 81 | |
| 7 | | 32 | | 57 | | 82 | |
| 8 | | 33 | | 58 | | 83 | |
| 9 | | 34 | | 59 | | 84 | |
| 10 | | 35 | | 60 | | 85 | |
| 11 | | 36 | | 61 | | 86 | |
| 12 | | 37 | | 62 | | 87 | |
| 13 | | 38 | | 63 | | 88 | |
| 14 | | 39 | | 64 | | 89 | |
| 15 | | 40 | | 65 | | 90 | |
| 16 | | 41 | | 66 | | 91 | |
| 17 | | 42 | | 67 | | 92 | |
| 18 | | 43 | | 68 | | 93 | |
| 19 | | 44 | | 69 | | 94 | |
| 20 | | 45 | | 70 | | 95 | |
| 21 | | 46 | | 71 | | 96 | |
| 22 | | 47 | | 72 | | 97 | |
| 23 | | 48 | | 73 | | 98 | |
| 24 | | 49 | | 74 | | 99 | |
| 25 | | 50 | | 75 | | 100 | |

Total Marks Obtained (in words) ....................................

(in figures) ....................................

Signature & Name of the Coordinator ...............................

(Evaluation) Date .............................